ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:	108(1171)
ಸದಸ್ಯರ ಹೆಸರು :	ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ)
ಉತ್ತರಿಸಬೇಕಾದ ದಿನಾಂಕ:	22-09-2021
ಉತ್ತರಿಸಬೇಕಾದ ಸಚಿವರ ಹೆಸರು :	ಮಾನ್ಯ ಕಂದಾಯ ಸಚಿವರು

	ಪ್ರಶ್ನೆ	ಉತ್ತರ
ಅ)	ಹಾಸನ ಜಿಲ್ಲೆ ವ್ಯಾಪ್ತಿಯಲ್ಲಿ ಕೈಗೊಂಡಿರುವ ಎತ್ತಿನಹೊಳೆ ನೀರಾವರಿ ಯೋಜನೆಗಳಿಗಾಗಿ ಎಷ್ಟು ಗ್ರಾಮಗಳಲ್ಲಿ ಎಷ್ಟು ಎಕರೆ ಜಮೀನನ್ನು ಭೂಸ್ವಾಧೀನ ಮಾಡಿಕೊಳ್ಳಲಾಗಿದೆ; (ಜಮೀನು ಕಳೆದುಕೊಂಡಿರುವ ಸಂತ್ರಸ್ಥರ ಹೆಸರು, ಜಮೀನಿನ ಪ್ರಮಾಣ ಮತ್ತು ಊರಿನ ವಿವರಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)	ಹಾಸನ ಜಿಲ್ಲೆಯಲ್ಲಿ ಎತ್ತಿನಹೊಳೆ ಕುಡಿಯುವ ನೀರು ಯೋಜನೆಗಾಗಿ 92 ಗ್ರಾಮಗಳಲ್ಲಿ ಒಟ್ಟು 2558-05 ಎಕರೆ ಜಮೀನನ್ನು ಸ್ವಾಧೀನಪಡಿಸಿಕೊಳ್ಳಬೇಕಾಗಿದೆ. ಈವರೆಗೆ 91 ಗ್ರಾಮಗಳಲ್ಲಿ 2381-30¼ ಎಕರೆ ಜಮೀನನ್ನು ಸ್ವಾಧೀನಪಡಿಸಿಕೊಂಡಿದ್ದು, 01 ಗ್ರಾಮದಲ್ಲಿ 176-14¾ ಎಕರೆ ಜಮೀನನ್ನು ಸ್ವಾಧೀನಪಡಿಸಿಕೊಳ್ಳಲು ಬಾಕಿ ಇದೆ. **(ಭೂಮಾಲೀಕರ ವಿವರವು ಅಗಾಧ ಪ್ರಮಾಣದಲ್ಲಿದ್ದು, ಮಾನ್ಯ ಶಾಸಕರಿಗೆ ಪ್ರತ್ಯೇಕವಾಗಿ ಒದಗಿಸಲಾಗುವುದು.)**
ಆ)	ಈ ಯೋಜನೆಗಾಗಿ ಭೂಮಿ ಕಳೆದುಕೊಂಡಿರುವ ರೈತರಿಗೆ ಸರ್ಕಾರದಿಂದ ಪರಿಹಾರ ನೀಡಲು ಕಂದಾಯ ಇಲಾಖೆಯು ಕೈಗೊಂಡಿರುವ ಕ್ರಮಗಳೇನು; ಕಂದಾಯ ಇಲಾಖೆಯ ವಿಳಂಬ ಧೋರಣೆಗಳಿಂದ ಭೂ ಸಂತ್ರಸ್ಥರಿಗೆ ಆಗುತ್ತಿರುವ ಅನಾನುಕೂಲಗಳ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ;	ಸದರಿ ಯೋಜನೆಗೆ ಈಗಾಗಲೇ ಭೂಸ್ವಾಧೀನಪಡಿಸಿಕೊಂಡ ಜಮೀನಿನ ಪೈಕಿ 755-33 ಎಕರೆ ಜಮೀನಿಗೆ ಪರಿಹಾರ ನೀಡಲು ರೂ.211,56,38,498/-ಗಳ ಮೊತ್ತದ ಐತೀರ್ಪಿಗೆ ಅನುಮೋದನೆ ನೀಡಲಾಗಿದೆ. ಉಳಿದ 1625-37¼ ಎಕರೆ ಜಮೀನಿಗೆ ಕೋರಿಕೆ ಇಲಾಖೆಯಿಂದ ಅನುದಾನ ಬಿಡುಗಡೆಗೊಳಿಸಲು ಕ್ರಮವಹಿಸಲಾಗುತ್ತಿದ್ದು, ನಂತರ ಭೂಸಂತ್ರಸ್ಥರಿಗೆ ಪರಿಹಾರ ಪಾವತಿಸಲಾಗುವುದು.
ಇ)	ಬಂದಿದ್ದಲ್ಲಿ, ಈ ಯೋಜನೆಗಳ ಭೂ ಸಂತ್ರಸ್ಥರಿಗೆ ಸರ್ಕಾರದಿಂದ ಇಲ್ಲಿಯವರೆಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು; ಮತ್ತು ಎಷ್ಟು ಸಂತ್ರಸ್ಥರಿಗೆ ಪರಿಹಾರ ನೀಡಲಾಗಿದೆ; ಪರಿಹಾರ ನೀಡಿರುವ ಮೊತ್ತವೆಷ್ಟು; (ಭೂ ಸಂತ್ರಸ್ಥರ ಹೆಸರು, ಪರಿಹಾರದ ಮೊತ್ತ ಮತ್ತು ಊರಿನ ವಿವರಗಳೊಂದಿಗೆ ನೀಡುವುದು)	ಭೂಸ್ವಾಧೀನಕ್ಕಾಗಿ ಕೋರಿಕೆ ಇಲಾಖೆಯಾದ ಜಲಸಂಪನ್ಮೂಲ ಇಲಾಖೆಯಿಂದ ಒಟ್ಟು ರೂ.190.15 ಕೋಟಿಗಳು ಅನುದಾನ ಬಿಡುಗಡೆಯಾಗಿದ್ದು, ರೂ.63.00 ಕೋಟಿಗಳನ್ನು ಬಿಡುಗಡೆ ಮಾಡುವುದಾಗಿ ವಿಶ್ವೇಶ್ವರಯ್ಯ ಜಲ ನಿಗಮ ಇವರು ವಿಶೇಷ ಭೂಸ್ವಾಧೀನಾಧಿಕಾರಿ, ಎತ್ತಿನಹೊಳೆ ಯೋಜನೆ ಇವರಿಗೆ ದಿ:27-08-2021ರ ಪತ್ರದಲ್ಲಿ ತಿಳಿಸಲಾಗಿರುತ್ತದೆ. ಸದರಿ ಯೋಜನೆಯಲ್ಲಿ ಇದುವರೆಗೆ ಒಟ್ಟು 150 ಭೂಮಾಲೀಕರುಗಳಿಗೆ ರೂ.47,43,85,722/-ಗಳ ಪರಿಹಾರವನ್ನು ಪಾವತಿಸಲಾಗಿದೆ. ಒಬ್ಬ ಭೂಮಾಲೀಕನು

		ಪರಿಹಾರಕ್ಕಾಗಿ ಅರ್ಜಿ ಸಲ್ಲಿಸದೇ ಜಮೀನನ್ನು ಬಿಟ್ಟು ಕೊಡದೇ ಇರುವುದರಿಂದ ರೂ.40,96,832/-ಗಳ ಮೊತ್ತವನ್ನು ಮಾನ್ಯ ನ್ಯಾಯಾಲಯದಲ್ಲಿ ಠೇವಣಿ ಇಡಲಾಗಿದೆ. **(ಭೂಮಾಲೀಕರ ವಿವರವು ಅಗಾಧ ಪ್ರಮಾಣದಲ್ಲಿದ್ದು, ಮಾನ್ಯ ಶಾಸಕರಿಗೆ ಪ್ರತ್ಯೇಕವಾಗಿ ಒದಗಿಸಲಾಗುವುದು.)**
ಈ)	ಈ ಯೋಜನೆಗಳಡಿ ಇದುವರೆಗೂ ಪರಿಹಾರ ಪಡೆಯದ ಭೂ ಸಂತ್ರಸ್ಥರು ಎಷ್ಟು ಜನ; (ಭೂ ಸಂತ್ರಸ್ಥರ ಹೆಸರು, ಪರಿಹಾರದ ಮೊತ್ತ ಮತ್ತು ಊರಿನ ವಿವರಗಳನ್ನು ನೀಡುವುದು) ಇವರಿಗೆ ಪರಿಹಾರ ನೀಡಲು ವಿಳಂಬವಾಗಿರುವುದಕ್ಕೆ ಕಾರಣಗಳೇನು; ಮತ್ತು ಯಾವ ಕಾಲಮಿತಿಯೊಳಗೆ ಪರಿಹಾರ ನೀಡಲು ಕ್ರಮವಹಿಸಲಾಗುವುದು? (ಸಂಪೂರ್ಣ ವಿವರ ನೀಡುವುದು)	ಈ ಯೋಜನೆಯಡಿ 629 ಭೂಮಾಲೀಕರಿಗೆ ಪರಿಹಾರ ಪಾವತಿಸಲು ಬಾಕಿ ಇದೆ. ಈ ಪೈಕಿ 10 ಗ್ರಾಮಗಳ 315 ಭೂಮಾಲೀಕರಿಗೆ ಪರಿಹಾರ ಪಡೆಯಲು ದಾಖಲೆ ನೀಡುವಂತೆ ವಿಶೇಷ ಭೂಸ್ವಾಧೀನಾಧಿಕಾರಿ ಯವರಿಂದ ದಿನಾಂಕ:15.09.2021ರಂದು ನೋಟೀಸ್ ನೀಡಲಾಗಿರುತ್ತದೆ. ದಾಖಲೆಗಳನ್ನು ಸಲ್ಲಿಸಿದ ನಂತರ ಪರಿಹಾರ ಪಾವತಿಸಲಾಗುವುದು. ಉಳಿಕೆ 314 ಭೂಮಾಲೀಕರ ಪೈಕಿ ಕೆಲವು ಭೂಮಾಲೀಕರು ಜಮೀನಿನ ಹಕ್ಕಿನ ಬಗ್ಗೆ ಮಾನ್ಯ ಸಿವಿಲ್ ನ್ಯಾಯಾಲಯದಲ್ಲಿ ಪ್ರಕರಣಗಳನ್ನು ದಾಖಲಿಸಿದ್ದು, ಕೆಲವು ಖಾತೆದಾರರು ಪೌತಿಯಾಗಿದ್ದು ಖಾತೆ ಬದಲಾವಣೆಯಾಗಬೇಕಾಗಿರುತ್ತದೆ. ಮತ್ತು ಕೆಲವು ಭೂಮಾಲೀಕರು ದಾಖಲೆಗಳನ್ನು ಹಾಜರುಪಡಿಸದೇ ಇರುವ ಕಾರಣಗಳಿಂದ ಪರಿಹಾರ ಪಾವತಿಸಲಾಗಿರುವುದಿಲ್ಲ. **(ಭೂಮಾಲೀಕರ ವಿವರವು ಅಗಾಧ ಪ್ರಮಾಣದಲ್ಲಿದ್ದು, ಮಾನ್ಯ ಶಾಸಕರಿಗೆ ಪ್ರತ್ಯೇಕವಾಗಿ ಒದಗಿಸಲಾಗುವುದು.)**

ಸಂಖ್ಯೆ: ಕಂಇ 19 ಭೂಸ್ವಾಹ 2021

(ಆರ್.ಅಶೋಕ)
ಕಂದಾಯ ಸಚಿವರು